ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಪ್ರಥಮ ದರ್ಜೆ ಕಾಲೇಜುಗಳಲ್ಲಿ ಲ್ಯಾಪ್‌ಟಾಪ್ ನೀಡುವ ಬಗ್ಗೆ

ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ )

417 (411) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಪ್ರಥಮ ದರ್ಜೆಯ ಕಾಲೇಜುಗಳೆÀಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ-ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ; (ಎಲ್ಲಾ ಕೋರ್ಸ್‌ಗಳು ಸೇರಿದಂತೆ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ವಿದ್ಯಾರ್ಥಿಗಳಿಗೆ ಸರ್ಕಾರದ ವತಿಯಿಂದ ಲ್ಯಾಪ್‌ಟಾಪ್ ಅನ್ನು ನೀಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಈ ಲ್ಯಾಪ್‌ಟಾಪ್ ನೀಡುವ ಯೋಜನೆಯನ್ನು ಯಾವಾಗ ಪ್ರಾರಂಭ ಮಾಡಲಾಯಿತು ; (ಮಾಹಿತಿ ಒದಗಿಸುವುದು)

(ಈ) ಈ ಯೋಜನೆಯನ್ನು ಪ್ರಾರಂಭ ಮಾಡಿದ ಅವಧಿಯಿಂದ 2019-20 ರ ಅಂತ್ಯಕ್ಕೆ ಎಷ್ಟು ಲ್ಯಾಪ್‌ಟಾಪ್‌ಗಳನ್ನು ವಿತರಣೆ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)

(ಉ) ಯಾವ ಮಾನದಂಡವನ್ನು ಅನುಸರಿಸಿ ಈ ಲ್ಯಾಪ್‌ಟಾಪ್‌ಗಳನ್ನು ನೀಡಲಾಗುತ್ತಿದೆ ;

(ಊ) ರಾಜ್ಯದಲ್ಲಿರುವ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳನ್ನು ವರ್ಗಾವಾರು ವಿಂಗಡಣೆ ಮಾಡಿ ಈ ಯೋಜನೆಯ ಸೌಲಭ್ಯವನ್ನು ನೀಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಇಲ್ಲಿಯ ತನಕ ಯಾವ ಯಾವ ವರ್ಗದವರಿಗೆ ಲ್ಯಾಪ್‌ಟಾಪ್ ವಿತರಣೆ ಮಾಡಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)